KARNATAKA SUCCESS NO 1
Kannada Daily
**ಸಂಪಾದಕರು/ಮಾಲೀಕರು**
ರಾಧಿಕಾ ಎ.ಆರ್.
Volume: 02 Issue-119
ಭಾನುವಾರ 09 ಮಾರ್ಚ್ 2025
Price: 2.00 Rs. Pages - 2

RNI: KARKAN/2023/88508

# ಕರ್ನಾಟಕ ಸಕ್ಸಸ್ ನಂ 1

ಕನ್ನಡ ದಿನಪತ್ರಿಕೆ

ನಮ್ಮ ಸಂಪರ್ಕ: ಇ–ಮೇಲ್: karnatakasuccessno1ar@gmail.com ಮೊಬೈಲ್: 9380988530, 9606988508

## ಪಿಎಚ್.ಡಿ ಪದವಿ



ತುಮಕೂರು: ಬೆಳಗಾವಿ ಜಿಲ್ಲೆ ಹುಕ್ಕೇರಿ ತಾಲೂಕು ಮಜತಿ ಗ್ರಾಮದ ಪರಸಪ್ಪ ಹಾಗೂ ಲಕ್ಷ್ಮೀ ದಂಪತಿ ಪುತ್ರ ಕೃಷ್ಣಾ ತಳವಾರ ಅವರು ತುಮಕೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಸಮಾಜಕಾರ್ಯ ವಿಭಾಗದ ಹಿರಿಯ ಪ್ರಾಧ್ಯಾಪಕ ಪ್ರೊ.ಬಿ.ರಮೇಶ್ ಮಾರ್ಗದರ್ಶನದಲ್ಲಿ ಮಂಡಿಸಿದ 'ಕರ್ನಾಟಕದ ಶೈಕ್ಷಣಿಕ ಮತ್ತು ಔದ್ಯೋಗಿಕ ಸಾಧನೆಯ ಮೇಲೆ 371(ಜೆ) ಪ್ರಭಾವ' ಕುರಿತ ಸಂಶೋಧನ ಮಹಾಪ್ರಬಂಧಕ್ಕೆ ತುಮಕೂರು ವಿವಿಯು ಪಿಎಚ್.ಡಿ ಪದವಿ ನೀಡಿದೆ.

# 'ಮಹಿಳೆಯರು ಸವಾಲುಗಳನ್ನು ಸಮರ್ಥವಾಗಿ ಎದುರಿಸಿ'

## ಜಿಲ್ಲಾ ಆಸ್ಪತ್ರೆಯ ಮಹಿಳಾ ದಿನಾಚರಣೆಯಲ್ಲಿ ಜಿಲ್ಲಾಧಿಕಾರಿ ಶುಭಾ ಕಲ್ಯಾಣ್ ಸಲಹೆ



ತುಮಕೂರು: ಜಿಲ್ಲೆಯ ಮಹಿಳೆಯರು, ಮಕ್ಕಳ ಅಪೌಷ್ಠಿಕತೆ ಪ್ರಮಾಣ ಕಡಿಮೆ ಮಾಡುವಲ್ಲಿ ಆರೋಗ್ಯ ಕಾರ್ಯಕರ್ತೆಯರು, ಅಧಿಕಾರಿಗಳ ಕಾರ್ಯ ಶ್ಲಾಘನೀಯ, ಪೋಷಣ್ ಅಭಿಯಾನದಲ್ಲಿ ಜಿಲ್ಲೆಯು ರಾಜ್ಯದಲ್ಲಿ ಮೊದಲ ಸ್ಥಾನ ಪಡೆದಿರುವುದರಲ್ಲಿ ನಿಮ್ಮಗಳ ಕೊಡುಗೆ ಇದೆ. ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಸೇವೆ ಮಾಡಿ ಜನರ ಆರೋಗ್ಯ ಕಾಪಾಡಲು ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ಶುಭಾ ಕಲ್ಯಾಣ್ ಆರೋಗ್ಯ ಇಲಾಖೆ ಸಿಬ್ಬಂದಿಗೆ ಹೇಳಿದರು.

ನಗರದ ಆಸ್ಪತ್ರೆ ಸಭಾಂಗಣದಲ್ಲಿ ನಡೆದ ವಿಶ್ವ ಮಹಿಳಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಜಿಲ್ಲಾಧಿಕಾರಿಗಳು, ಜನರ ಆರೋಗ್ಯ ರಕ್ಷಣೆಯ ಮಹತ್ವದ ಸೇವೆಯಲ್ಲಿರುವ ಆರೋಗ್ಯ ಇಲಾಖೆ ಕಾರ್ಯಕರ್ತೆಯರು, ಸಿಬ್ಬಂದಿ ಕಾರ್ಯ ಒತ್ತಡದ ನಡುವೆ ತಮ್ಮ ಆರೋಗ್ಯದ ಕಡೆಗೂ ಗಮನ ಹರಿಸಬೇಕು ಎಂದು ಹೇಳಿದರು.

ಮಹಿಳೆಯರಿಗೆ ಸಾಕಷ್ಟು ಸವಾಲುಗಳಿರುತ್ತವೆ. ಕುಟುಂಬ ನಿರ್ವಹಣೆ ಜೊತೆಗೆ ವೃತ್ತಿಯ ಕೆಲಸದ ಒತ್ತಡವೂ ಇರುತ್ತದೆ. ಎರಡೂ ಕಡೆ ಎದುರಾಗುವ ಸವಾಲುಗಳನ್ನು ಸಮರ್ಥವಾಗಿ ಎದುರಿಸಬೇಕು. ಅಂತಹ ಸಾಮರ್ಥ್ಯ ಮಹಿಳೆಯರಿಗೆ ಇದೆ. ಆ ನಿಟ್ಟಿನಲ್ಲಿ ಯಶಸ್ವಿಯಾಗಬೇಕು. ಮಹಿಳಾ ದಿನಾಚರಣೆಯ ಮಹತ್ವ ತಿಳಿದು ಅದರ ಆಶಯಗಳನ್ನು ಎಲ್ಲರೂ ಅನುಸರಿಸಿಕೊಂಡು ಹೋಗಬೇಕು ಎಂದು ಜಿಲ್ಲಾಧಿಕಾರಿಗಳು ಹೇಳಿದರು.

ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಅಸ್ಗರ್ ಬೇಗ್ ಮಾತನಾಡಿ, ಮಹಿಳಾ ದಿನ ಆಚರಣೆಯ ಆಶಯ ತಿಳಿಸಿ, ಮಹಿಳೆಗೆ ಆದಿಶಕ್ತಿಯ ಶಕ್ತಿ ಇರುತ್ತದೆ. ಆಕೆ ಯಾವುದನ್ನಾದರೂ ಸಮರ್ಥವಾಗಿ ಸಾಧಿಸುವ ಶಕ್ತಿ ಇರುತ್ತದೆ. ಕುಟುಂಬ, ಸಮಾಜದಲ್ಲೂ ಮಹಿಳೆಯರ ಪ್ರಮುಖ ಪಾತ್ರ ವಹಿಸುವ ಮಹಿಳೆಯ ಹೊಣೆಗಾರಿಕೆಯೂ ಹೆಚ್ಚಿರುತ್ತದೆ. ಮಹಿಳೆಯ ಹಕ್ಕು, ತ್ಯಾಗ, ಶೋಷಣೆ, ದೌರ್ಜನ್ಯ ಕುರಿತಂತೆ ಮಹಿಳಾ ದಿನಾಚರಣೆ ಸಂದರ್ಭದಲ್ಲಿ ಚರ್ಚೆಗೆ ಬಂದು ಮಹಿಳೆಯರ ಸ್ಥಾನಮಾನಗಳ ಬಗ್ಗೆ ಜನರಲ್ಲಿ ಮನದಟ್ಟು ಮಾಡಿ, ಸಾಮಾಜಿಕ, ಸಾಂಸಾರಿಕ ವ್ಯವಸ್ಥೆಯನ್ನು ಸುಧಾರಣೆ ಮಾಡಲು ಸಹಕಾರಿಯಾಗುತ್ತದೆ ಎಂದರು.

ಮಕ್ಕಳಿಗೆ ಮನೆಯೇ ಮೊದಲ ಪಾಠ ಶಾಲೆ, ತಾಯಿಯೇ ಮೊದಲ ಗುರು ಎನ್ನುತ್ತಾರೆ. ತಾಯಿ ತಮ್ಮ ಮಕ್ಕಳಿಗೆ ತಾಯಿ ಬಾಲ್ಯದಿಂದಲೇ ಆದರ್ಶ ಗುಣಗಳನ್ನು ತಿಳಿಸಿಕೊಡಬೇಕು. ಈಗ ಮೊಬೈಲ್ ಮಕ್ಕಳ ಪಾಲಿನ ದುಷ್ಟ ಶಕ್ತಿ ಎನ್ನುವಂತಾಗಿದೆ. ಹತ್ತು ವರ್ಷದವರೆಗೆ ಮಕ್ಕಳಿಗೆ ಮೊಬೈಲ್ ಕೊಡಬೇಡಿ, ಅಂತಹ ಮಕ್ಕಳು ಮುಂದೆ ಎಲ್ಲಾ ರೀತಿಯಲ್ಲಿಯೂ ಯಶಸ್ವಿಯಾಗುತ್ತಾರೆ ಎಂದು ಹೇಳಿದರು.

ಜಿಲ್ಲಾ ಸರ್ವೆಲೆನ್ಸ್ ಅಧಿಕಾರಿ ಡಾ.ರಾಮೇಗೌಡ, ತಜ್ಞ ವೈದ್ಯರಾದ ಡಾ.ಈಶ್ವರಯ್ಯ, ಡಾ.ಪ್ರಭಾ, ಗಾಯತ್ರಿ ಮೊದಲಾದವರು ಭಾಗವಹಿಸಿದ್ದರು.




ತುಮಕೂರು ನಗರದ ವರಾನ ಗ್ಲೋಬಲ್ ಟ್ರಸ್ಟ್‌ನ ಅಂಗಸಂಸ್ಥೆಯಾದ ಅನನ್ಯ ಇನ್ಸ್ಟಿಟ್ಯೂಟ್ ಆಫ್ ಕಾಮರ್ಸ್ ಅಂಡ್ ಮ್ಯಾನೇಜ್ಮೆಂಟ್ ಕಾಲೇಜಿನಲ್ಲಿ ಮಹಿಳಾ ದಿನಾಚರಣೆಯನ್ನು "ಸ್ತ್ರೀ ಎಂದರೆ ಅಷ್ಟೇ ಸಾಕೇ" ಎಂಬ ಕಾರ್ಯಕ್ರಮ ಅಡಿಯಲ್ಲಿ ಹಮ್ಮಿಕೊಳ್ಳಲಾಗಿತ್ತು. ಚಿತ್ರದಲ್ಲಿ ತುಮಕೂರಿನ ವಾಣಿಜ್ಯ ತೆರಿಗೆ ಸಹಾಯಕ ಆಯುಕ್ತೆ ಟಿ.ಎಸ್.ಸಿದ್ದಗಂಗಾ, ಸಾಮಾಜಿಕ ಕಾರ್ಯಕರ್ತೆ ಹಾಗೂ ರೋಟರಿ ಮುಖ್ಯಸ್ಥೆ ಆಶಾಪ್ರಸನ್ನಕುಮಾರ್, ಸಾಮಾಜಿಕ ಕಾರ್ಯಕರ್ತೆ ಸುಭಾಷಿಣಿರವೀಶ್, ಅನನ್ಯ ಸಂಸ್ಥೆಯ ಅಧ್ಯಕ್ಷರಾದ ಸಿ.ಎ. ಎಸ್.ವಿಶ್ವನಾಥ್, ಅನನ್ಯ ಸಂಸ್ಥೆಯ ಉಪಾಧ್ಯಕ್ಷರಾದ ಬಿ.ಆರ್.ಉಮೇಶ್, ಕಾರ್ಯದರ್ಶಿಗಳಾದ ಟಿ.ಎನ್. ಚೆನ್ನಬಸವಪ್ರಸಾದ್, ಅನನ್ಯ ಸಂಸ್ಥೆಯ ಟ್ರಸ್ಟಿಯಾದ ಡಾ.ಹೆಚ್.ಹರೀಶ್, ಅನನ್ಯ ಕಾಲೇಜಿನ ಪ್ರಾಂಶುಪಾಲರಾದ ಡಾ.ಎಂ.ವಿಶ್ವಾಸ್, ಅನನ್ಯ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಆರ್.ರಘು, ಕಾಮರ್ಸ್ ವಿಭಾಗದ ಮುಖ್ಯಸ್ಥೆ ದೇವಕಿಪ್ರಸಾದ್, ಬಿ.ಸಿ.ಎ ವಿಭಾಗದ ಮುಖ್ಯಸ್ಥರಾದ ಇಫ್ತಾನ್ ಅಹಮ್ಮದ್, ಉದ್ಯೋಗ ಅಧಿಕಾರಿಯಾದ ಪ್ರೊ.ಶಮಂತಪ್ರಿಯ ಮುಂತಾದವರು ಉಪಸ್ಥಿತರಿದ್ದರು.

# ಕರ್ನಾಟಕ ಸಾಹಿತ್ಯ ಅಕಾಡೆಮಿ ಪ್ರಶಸ್ತಿಗೆ ಆಯ್ಕೆ

ಬೆಂಗಳೂರು: ಕರ್ನಾಟಕ ಸಾಹಿತ್ಯ ಅಕಾಡೆಮಿಯ 2023ನೇ ಸಾಲಿನ ವಾರ್ಷಿಕ ಗೌರವ ಪ್ರಶಸ್ತಿ ಹಾಗೂ ಸಾಹಿತ್ಯ ಶ್ರೀ ಪ್ರಶಸ್ತಿಗಳನ್ನು ಪ್ರಕಟಿಸಲಾಗಿದ್ದು, ಐವರು ಹಿರಿಯ ಸಾಹಿತಿಗಳಿಗೆ ವಾರ್ಷಿಕ ಗೌರವ ಹಾಗೂ 10 ಮಂದಿಗೆ ಸಾಹಿತ್ಯ ಶ್ರೀ ಪ್ರಶಸ್ತಿ ದೊರೆತಿದೆ.

ಡಾ. ಸಿ.ವೀರಣ್ಣ ಬೆಂಗಳೂರು, ಡಾ. ಶ್ರೀರಾಮ ಹಿಟ್ಟಣ ಬಾಗಲಕೋಟೆ, ಜಾಣಗೆರೆ ವೆಂಕಟರಾಮಯ್ಯ ತುಮಕೂರು, ಎ.ಎಂ ಮದರಿ ಕೊಪ್ಪಳ, ಡಾ. ಸಬೀಹಾ ಭೂಮಿಗೌಡ ಮಂಗಳೂರ ಇವರು ಗೌರವ ಪ್ರಶಸ್ತಿಗೆ ಆಯ್ಕೆಯಾಗಿದ್ದು, 50 ಸಾವಿರ ನಗದು, ಪ್ರಶಸ್ತಿ ಫಲಕ ಹಾಗೂ ಪ್ರಮಾಣಪತ್ರ ಒಳಗೊಂಡಿದೆ.

<u>ಸಾಹಿತ್ಯ ಶ್ರೀ ಪ್ರಶಸ್ತಿ ಪುರಸ್ಕೃತರು</u>

ಮೈಸೂರಿನ ಡಾ.ಎಂ.ಎಸ್ ಶೇಖರ್, ಬೆಂಗಳೂರಿನ ಜಿ.ಎನ್ ಮೋಹನ್, ತುಮಕೂರಿನ ಡಾ. ಟಿ.ಎಸ್ ವಿವೇಕಾನಂದ, ಬೆಳಗಾವಿಯ ಡಾ. ಜಯಶ್ರೀ ಕಂಬಾರ, ಧಾರವಾಡದ ನಿಜಲಿಂಗಪ್ಪಯಮನಪ್ಪ ಮಟ್ಟಿಹಾಳ, ಕೋಲಾರ ಡಾ.ಬಾಲಗುರು ಮೂರ್ತಿ, ಕಲಬುರಗಿಯ ಪ್ರೊ. ಶಿವಗಂಗಾರುಮ್ಮ, ಬೆಂಗಳೂರಿನ ಡಾ. ರೀಟಾರೀನಿ, ಶಿವಮೊಗ್ಗದ ಡಾ. ಕಲೀಂವುಲ್ಲ ಹಾಗೂ ಳ್ಳಾರಿಯ ಡಾ. ವೆಂಕಟಗಿರಿ ದಳವಾಯಿ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

## ರಾಜ್ಯಮಟ್ಟದ ವಿಚಾರ ಸಂಕಿರಣದಲ್ಲಿ ಮಂಡ್ಯ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಕೆ.ಶಿವಚಿತ್ತಪ್ಪ

# ಕಾಲಕ್ಕೆ ತಕ್ಕಂತೆ ಪಠ್ಯಕ್ರಮ, ಬೋಧನಾ ಕ್ರಮ ಅಳವಡಿಕೆ ಅಗತ್ಯ



ತುಮಕೂರು: ಶಿಕ್ಷಣವೆಂಬದು ನಿರಂತರ ಬದಲಾವಣೆಯನ್ನು ಕಾಣುತ್ತಿದೆ.ಬದಲಾವಣೆಗೆ ತಕ್ಕಂತೆ ಪಠ್ಯಕ್ರಮ, ಬೋಧನಾ ಕ್ರಮಗಳನ್ನು ಅಳವಡಿಸಿಕೊಳ್ಳುವ ಮೂಲಕ ಅರ್ಥಶಾಸ್ತ್ರ ವಿಷಯವನ್ನು ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಹೆಚ್ಚು ಉಪಯುಕ್ತವನ್ನಾಗಿಸಲು ಅರ್ಥಶಾಸ್ತ್ರ ಉಪನ್ಯಾಸಕರು ಬದಲಾವಣೆಯನ್ನು ಒಪ್ಪಿಕೊಳ್ಳುವ, ಅಪ್ಪಿಕೊಳ್ಳುವ ಅನಿವಾರ್ಯತೆ ಇದೆ ಎಂದು ಮಂಡ್ಯ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಕೆ.ಶಿವಚಿತ್ತಪ್ಪ ತಿಳಿಸಿದ್ದಾರೆ.

ನಗರದ ಸರಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ ಕಾಲೇಜು ಶಿಕ್ಷಣ ಇಲಾಖೆ, ಸರಕಾರಿ ಪ್ರಥಮದರ್ಜೆ ಕಾಲೇಜು,ಅರ್ಥಶಾಸ್ತ್ರ ವಿಭಾಗ ತುಮಕೂರು, ತುಮಕೂರು ವಿವಿ ಅರ್ಥಶಾಸ್ತ್ರ ಅಧ್ಯಾಪಕರ ಸಂಘದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಉನ್ನತ ಶಿಕ್ಷಣದಲ್ಲಿ ನಾವಿನ್ಯತೆ (ಇನೋವೇಷನ್ ಇನ್ ಹೈಯರ್ ಏಜುಕೇಷನ್) ಎಂಬ ವಿಷಯ ಕುರಿತ ರಾಜ್ಯಮಟ್ಟದ ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡುತಿದ್ದ ಅವರು, ಖಾಸಗಿ ಶಿಕ್ಷಣ ಸಂಸ್ಥೆಗಳು ಒಳ್ಳೆಯ ಮೂಲಭೂತ ಸೌರ್ಕಯದ ಜೊತೆಗೆ ಅತ್ಯಾಧುನಿಕ ತಂತ್ರಜ್ಞಾನದ ಮೂಲಕ ಮಕ್ಕಳಿಗೆ ವಿಷಯವನ್ನು ಅರ್ಥಮಾಡಿಸುವ ರೀತಿಯಲ್ಲಿಯೇ ನಾವುಗಳು ಕೂಡ ಇರುವ ಸೌಲಭ್ಯಗಳನ್ನೇ ಬಳಸಿಕೊಂಡು ಮಕ್ಕಳ ಸ್ನೇಹಿ ಪಠ್ಯಕ್ರಮದ ಮೂಲಕ ಅವರನ್ನು ಪೈಪೋಟಿಯ ಜಗತ್ತಿನಲ್ಲಿ ಈಜುವಂತಹ ಶಿಕ್ಷಣವನ್ನು ನೀಡಬೇಕಾಗಿದೆ ಎಂದರು.

ಇತ್ತೀಚಿಗೆ ಅರ್ಥಶಾಸ್ತ್ರ ವಿಷಯಕ್ಕೆ ನೊಂದಣಿಯಾಗುವ ವಿದ್ಯಾರ್ಥಿಗಳ ಸಂಖ್ಯೆ ಕ್ಷೀಣಿಸಿದೆ.ಇದಕ್ಕೆ ಕಾರಣ ಹಲವಾರು. ವಿಜ್ಞಾನ ವಿಷಯಕ್ಕಿಂತಲೂ ಕಠಿಣ.ಅರ್ಥವಾಗಲ್ಲ ಎಂಬ ಮಾತುಗಳು ಸರ್ವೆ ಸಾಮಾನ್ಯವಾಗಿವೆ.ಇದೇ ಪರಿಸ್ಥಿತಿ ಮುಂದುವರೆದರೆ ಮುಂದಿನ ದಿನಗಳಲ್ಲಿ ಕಾರ್ಯಒತ್ತಡ ಇಲ್ಲದೆ ಎಕನಾಮಿಕ್ಸ್ ಭೋಧಿಸುವ ಶಿಕ್ಷಕರು ಕೆಲಸವಿಲ್ಲದೆ ಇರಬೇಕಾದ ಪರಿಸ್ಥಿತಿ ಎದುರಾದರೂ ಆಶ್ಚರ್ಯವಿಲ್ಲ. ಹಾಗಾಗಿ ಈಗಲೇ ನಾವು ಎಚ್ಚೆತ್ತುಕೊಂಡು, ಮಕ್ಕಳಲ್ಲಿ ಆತ್ಮವಿಶ್ವಾಸ ಹೆಚ್ಚಿಸಿ, ನಾವು ಸಹ ಈ ಸ್ಪರ್ಧಾತ್ಮಕ ಪ್ರಪಂಚದಲ್ಲಿ ಬದುಕುಬಲ್ಲವು ಎಂಬ ಆತ್ಮಸ್ಥೈರ್ಯವನ್ನು ಹುಟ್ಟು ಹಾಕಬೇಕಿದೆ. ಹಾಗಾಗಿ ನಾವು ಕೂಡ ನಮ್ಮ ಬೋಧನ ಕೌಶಲ್ಯಗಳನ್ನು ಹೆಚ್ಚಿಸಿಕೊಂಡು, ಪಿಪಿಟಿ, ಐಸಿಟಿ ಮೂಲಕ, ವಾಟ್ಸ್‌ಫ್ ಮೂಲಕ ಬೋಧನೆ ಮಾಡಿ,ನಾವು ಮಾಡಿದ ಪಾಠ ಮಕ್ಕಳಿಗೆ ಅರ್ಥವಾಗಿದೆಯೇ, ಇಲ್ಲವೇ ಎಂದು ಕ್ರಾಸ್‌ಚೆಕ್ ಮಾಡಿಕೊಳ್ಳುವ ಅಗತ್ಯವಿದೆ.ಮಕ್ಕಳು ಹಾಗೂ ಸಮಾಜದ ಅಗತ್ಯ ಅರಿತು,ಪಠ್ಯಕ್ರಮಗಳಲ್ಲಿ ಅಗತ್ಯ ಬದಲಾವಣೆ ಮಾಡಿಕೊಂಡು ಕೆಲಸ ಮಾಡಿದರೆ ಮಾತ್ರ ಉತ್ತಮ ಭವಿಷ್ಯ ನಮ್ಮದಾಗಲಿದೆ. ಈ ನಿಟ್ಟಿನಲ್ಲಿ ಎಲ್ಲಾ ಅರ್ಥಶಾಸ್ತ್ರ ಉಪನ್ಯಾಸಕರು ಹೊಸತನವನ್ನು ಅಳವಡಿಸಿಕೊಳ್ಳಲು ಮುಂದಾಗಬೇಕಿದೆ ಎಂದು ಕುಲಪತಿಗಳಾದ ಪ್ರೊ.ಕೆ.ಶಿವಚಿತ್ತಪ್ಪ ತಿಳಿಸಿದರು.

ಉನ್ನತಶಿಕ್ಷಣದಲ್ಲಿ ನಾವಿನ್ಯತೆ ಎಂಬ ವಿಷಯ ಕುರಿತು ಹಿರಿಯ ಅರ್ಥಶಾಸ್ತ್ರ ಪ್ರಾಧ್ಯಾಪಕರಾದ ಪ್ರೊ.ಬಿ.ರವೀಂದ್ರಕುಮಾರ್ ಮಾತನಾಡಿದರು. ಪ್ರಾಸ್ತಾವಿಕವಾಗಿ ಡಾ.ಜಿ.ತಿಪ್ಪೇಸ್ವಾಮಿ, ಅಧ್ಯಕ್ಷತೆ ವಹಿಸಿದ್ದ ಸರಕಾರಿ ಪ್ರಥಮದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಟಿ.ಡಿ.ವಸಂತ ಮಾತನಾಡಿದರು. ವೇದಿಕೆಯಲ್ಲಿ ತುಮಕೂರು ವಿವಿ ಅಧ್ಯಾಪಕರ ಸಂಘದ ಅಧ್ಯಕ್ಷ ಡಾ.ಜಿ.ತಿಪ್ಪೇಸ್ವಾಮಿ,ತುಮಕೂರು ವಿವಿ ಅರ್ಥಶಾಸ್ತ್ರ ಪರೀಕ್ಷಾ ಮಂಡಳಿ ಅಧ್ಯಕ್ಷರಾದ ಗೋವಿಂದರಾಜು ಎನ್., ಐಕ್ಯೂಎಸಿ ಸಂಚಾಲಕರಾದ ಹರಿದಾಸ್ ಎಸ್, ಅರ್ಥಶಾಸ್ತ್ರ ವಿಭಾಗದ ಸಹ ಪ್ರಾಧ್ಯಾಪಕರಾದ ಡಾ.ಜಿ.ಕೆ.ನಾಗರಾಜು, ಜಿ.ಕೆ.ಶಿವಲಿಂಗಯ್ಯ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಶಿಕ್ಷಣ ಹಕ್ಕು ಕಾಯ್ದೆ ಪರಿಣಾಮಕಾರಿ ಜಾರಿಗೆ ಮಕ್ಕಳ ಆಯೋಗ ಶಿಪಾರಸ್ಸು




ತುಮಕೂರು: ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಲು ಅಗತ್ಯವಾದ ಮೂಲಭೂತ ಸೌಲಭ್ಯಗಳನ್ನು ಹಾಗೂ ನುರಿತ ಶಿಕ್ಷಕರ ನೇಮಕವಾದಲ್ಲಿ ಮಾತ್ರ ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆಯ ಆಶಯ ಈಡೇರಲಿದೆ. ತನ್ಮೂಲಕ ಸರ್ಕಾರಿ ಶಾಲೆಗಳ ಸಬಲೀಕರಣ ಸಾಧ್ಯವಾಗಲಿದೆ. ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ –2009ರ ಸೆಕ್ಷನ್ 31ರಡಿಯಲ್ಲಿ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗವು ಈ ಕಾಯ್ದೆಯ ಮೇಲ್ವಿಚಾರಣೆಯ ಜವಾಬ್ದಾರಿ ಹೊಂದಿದ್ದು ಈ ಆರ್ಥಿಕ ವರ್ಷದಲ್ಲಿ ಕರ್ನಾಟಕದ ಎಲ್ಲಾ ಜಿಲ್ಲೆಗಳಲ್ಲೂ ಸದರಿ ಕಾಯ್ದೆಯ ಪ್ರಗತಿ ಪರಿಶೀಲನಾ ಸಭೆಗಳನ್ನು ನಡೆಸಿದೆ. ಮುಂದಿನ ಕೆಲವು ದಿನಗಳಲ್ಲಿ ಈ ಬಗ್ಗೆ ಆಯೋಗವು ಸರ್ಕಾರಕ್ಕೆ ಸೂಕ್ತ ಶಿಪಾರಸ್ಸು ನೀಡಲಿದೆ ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ.ಕೆ.ಟಿ ತಿಪ್ಪೇಸ್ವಾಮಿ ಹೇಳಿದರು.

ಅವರು ತುಮಕೂರಿನ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕರ ಕಚೇರಿ ಸಭಾಂಗಣದಲ್ಲಿ ತುಮಕೂರು ಹಾಗೂ ಮಧುಗಿರಿ ಶೈಕ್ಷಣಿಕ ಜಿಲ್ಲೆಯ ಶಿಕ್ಷಣ ಇಲಾಖೆಯ ಅಧಿಕಾರಿಗಳೊಂದಿಗೆ ನಡೆದ ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ –2009ರ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಇತ್ತೀಚೆಗೆ ಖಾಸಗಿ ಶಾಲೆಗಳು ವಿವಿಧ ಕಾರಣಗಳಿಂದ ವಿದ್ಯಾರ್ಥಿಗಳ ವರ್ಗಾವಣೆ ಪತ್ರ ನೀಡದೇ ಸತಾಯಿಸುತ್ತಿರುವ ಬಗ್ಗೆ ಸಾಕಷ್ಟು ದೂರುಗಳು ಆಯೋಗಕ್ಕೆ ಬರುತ್ತಿದ್ದು, ಈ ಬಗ್ಗೆ ಆಯೋಗವು ಗಂಭೀರವಾಗಿ ಪರಿಗಣಿಸಿದೆ. ಈ ಕುರಿತು ಖಾಸಗಿ ಶಾಲೆಗಳಿಗೆ ಸೂಕ್ತ ನಿರ್ದೇಶನ ನೀಡುವಂತೆ ಶಾಲಾ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದ ಅವರು, ಅನುದಾನ ಮತ್ತು ಅನುದಾನ ರಹಿತ ಶಾಲೆಗಳ ಮುಖ್ಯಾಧ್ಯಾಪಕರ ಕೊಠಡಿಯಲ್ಲಿ ಆರ್‌ಟಿಇ ಸೆಲ್ನ ಸಂಪೂರ್ಣ ಮಾಹಿತಿಯುಳ್ಳ ಫಲಕವನ್ನು ಕಡ್ಡಾಯವಾಗಿ ಅಳವಡಿಸಬೇಕು ಹಾಗೂ ಖಾಸಗಿ ಶಾಲೆಗಳಲ್ಲಿ ಕಡ್ಡಾಯವಾಗಿ ಪಿಟಿಎ ರಚನೆ ಮಾಡಿ, ಪೋಷಕರು ಮತ್ತು ಆಡಳಿತ ಮಂಡಳಿ ಚರ್ಚಿಸಿ ಶುಲ್ಕ ನಿಗಧಿಪಡಿಸಬೇಕು ಹಾಗೂ ಈ ಸಂಬಂದ ಅಗತ್ಯ ದಾಖಲೆಗಳನ್ನು ಇಡಬೇಕು ಎಂದರು.

ಮಕ್ಕಳಿಗೆ ಗುಣಮಟ್ಟದ ಕಲಿಕೆಯ ಜೊತೆ ಮಕ್ಕಳ ಸುರಕ್ಷತೆಯೂ ಅಷ್ಟೇ ಮುಖ್ಯವಾಗಿದೆ. ಈ ನಿಟ್ಟಿನಲ್ಲಿ ಮಕ್ಕಳ ರಕ್ಷಣಾ ನೀತಿ–2016 ಪರಿಣಾಮಕಾರಿ ಅನುಷ್ಠಾನಕ್ಕೆ ಎಲ್ಲಾ ಹಂತದ ಅಧಿಕಾರಿಗಳು ಪ್ರಯತ್ನಿಸಬೇಕು. ಸರ್ಕಾರಿ, ಖಾಸಗಿ ಸೇರಿದಂತೆ ವಿವಿಧ ಇಲಾಖೆಗಳ ಅಡಿ ಕಾರ್ಯನಿರ್ವಹಿಸುವ ಶಾಲೆಗಳಲ್ಲಿ ಕಡ್ಡಾಯವಾಗಿ ಮಕ್ಕಳ ಸುರಕ್ಷತಾ ಸಮಿತಿ ರಚನೆ ಮಾಡಬೇಕು ಎಂದರು. ಶಾಲೆ ಬಿಟ್ಟ ಮಕ್ಕಳಿಗೆ ಕೇವಲ ಮನವೊಲಿಕೆ ಅಥವಾ ನೋಟಿಸ್ ನೀಡಿ ಮಕ್ಕಳನ್ನು ಶಾಲೆಗೆ ಕರೆದುಕೊಂಡು ಬರಲು ಸಾಧ್ಯವಿಲ್ಲ. ಮಕ್ಕಳು ಯಾವ ಕಾರಣಕ್ಕೆ ಶಾಲೆ ಬಿಟ್ಟಿದ್ದಾರೆ ಎಂಬದುರ ಕುರಿತು ನಿರ್ದಿಷ್ಟ ಕಾರಣ ಗುರುತಿಸಿ ರಚನಾತ್ಮಕ ಪರಿಹಾರ ನೀಡಬೇಕು. ಶಾಲೆ ಬಿಟ್ಟ ಮಕ್ಕಳ ತಾಲೂಕುವಾರು ಪಟ್ಟಿ ತಯಾರಿಸಿ ಪ್ರತಿ 3 ತಿಂಗಳಿಗೊಮ್ಮೆ ತಾಲ್ಲೂಕು ಮಟ್ಟದ ಮಕ್ಕಳ ರಕ್ಷಣಾ ಸಮಿತಿ ಸಭೆಯಲ್ಲಿ ಚರ್ಚಿಸಿ ಸಂಬಂಧಪಟ್ಟ ಇಲಾಖೆಯಿಂದ ಸಮಸ್ಯೆ ಮತ್ತು ಸೂಕ್ತ ಪರಿಹಾರ ಒದಗಿಸಲು ಪ್ರಯತ್ನಿಸಿದಾಗ ಶಾಲೆ ಬಿಡುವ ಮಕ್ಕಳ ಸಂಖ್ಯೆ ಕಡಿಮೆಯಾಗುತ್ತದೆ. ಆ ನಿಟ್ಟಿನಲ್ಲಿ ಅಧಿಕಾರಿಗಳು ಪ್ರಯತ್ನಿಸಬೇಕು ಎಂದರು.

ಅತಿಥಿ ಶಿಕ್ಷಕರಿಗೆ ಜೆ.ಜೆ. ಕಾಯ್ದೆ, ಬಾಲ್ಯ ವಿವಾಹ ನಿಷೇಧ ಕಾಯ್ದೆ ಹಾಗೂ ಆರ್.ಟಿ.ಇ ಪೋಕ್ಸೋ ಕಾಯ್ದೆ ಹಾಗೂ ಮಕ್ಕಳ ರಕ್ಷಣಾ ನೀತಿ ಕುರಿತು ಕಡ್ಡಾಯವಾಗಿ ತರಬೇತಿ ನೀಡಬೇಕು ಮತ್ತು ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳುವ ಸಂದರ್ಭದಲ್ಲಿ ಪೊಲೀಸ್ ವೆರಿಫಿಕೇಶನ್ ಕಡ್ಡಾಯವಾಗಿ ಮಾಡಬೇಕು. ಅನಧಿಕೃತವಾಗಿ ಕೋಚಿಂಗ್ ಸೆಂಟರ್‌ಗಳಿದ್ದರೆ ನೋಟಿಸ್ ನೀಡಬೇಕು ಹಾಗೂ ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಕೋಚಿಂಗ್ ಸೆಂಟರ್ ನಡೆಸಲು ಅನುಮತಿ ಪಡೆಯಬೇಕು ಎಂದರು.

ಸಭೆಯಲ್ಲಿ ಶಾಲಾ ಶಿಕ್ಷಣ ಇಲಾಖೆಯ ತುಮಕೂರು ಶೈಕ್ಷಣಿಕ ಜಿಲ್ಲೆಯ ಉಪ ನಿರ್ದೇಶಕ ಶ್ರೀ ಮನಮೋಹನ್ ರವರು, ಮಧುಗಿರಿ ಶೈಕ್ಷಣಿಕ ಜಿಲ್ಲೆಯ ಉಪ ನಿರ್ದೇಶಕಿ ಶ್ರೀಮತಿ ಗಿರಿಜಾರವರು, ಎಲ್ಲಾ ತಾಲ್ಲೂಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಬಿ.ಅರ.ಪಿಗಳು, ಬಿಸಿಯೂಟದ ಸಹಾಯಕ ನಿರ್ದೇಶಕರು, ಶಿಕ್ಷಣ ಇಲಾಖೆಯ ಜಿಲ್ಲಾ ಮತ್ತು ತಾಲೂಕು ಮಟ್ಟದ ಉಸ್ತುವಾರಿ ಅಧಿಕಾರಿಗಳು ಮತ್ತಿತರರು ಇದ್ದರು.

## ಮಹಾತ್ಮ ಗಾಂಧಿ ಕ್ರೀಡಾಂಗಣದಲ್ಲಿ ವಿಶ್ವ ಮಹಿಳಾ ದಿನಾಚರಣೆಯ ಕ್ರೀಡಾ ಸ್ಪರ್ಧೆಗಳು

# ಪ್ರತಿ ಗಂಡಸಿನ ಯಶಸ್ಸನ್ನು ಬಯಸುವವಳು ಹೆಣ್ಣು: ರೂಪಾ ಶೆಟ್ಟಾಳಯ್ಯ



ತುಮಕೂರು: ಪ್ರತಿಯೊಬ್ಬ ಪುರುಷನ ಯಶಸ್ಸಿನ ಹಿಂದೆ ಮಹಿಳೆಯರು ಇದ್ದಾರೆ. ಸಹೋದರಿಯಾಗಿ, ತಾಯಿಯಾಗಿ, ಗೆಳತಿಯಾಗಿ ಪ್ರತಿ ಗಂಡಸಿನ ಯಶಸ್ಸನ್ನು ಬಯಸುವವಳು ಹೆಣ್ಣು. ಮಹಿಳೆಯರಿಲ್ಲದ ಪ್ರಪಂಚವನ್ನು ಊಹಿಸಿಕೊಳ್ಳಲು ಸಾಧ್ಯವಿಲ್ಲ ಎಂದು ನಗರಪಾಲಿಕೆ ಮಾಜಿ ಉಪಮೇಯರ್ ರೂಪಾ ಶೆಟ್ಟಾಳಯ್ಯ ಅಭಿಪ್ರಾಯಪಟ್ಟಿದ್ದಾರೆ.


ನಗರದ ಮಹಾತ್ಮಗಾಂಧಿ ಒಳಾಂಗಣ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಭಿವೃದ್ಧಿ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಆಯೋಜಿಸಿದ್ದ ವಿಶ್ವ ಮಹಿಳಾ ದಿನಾಚರಣೆಯ ಕ್ರೀಡಾ ಸ್ಪರ್ಧೆಗಳ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡುತಿದ್ದ ಅವರು, ಒಂದು ಹೆಣ್ಣು ಮತ್ತೊಂದು ಜೀವಕ್ಕೆ ಉಸಿರು ನೀಡುತ್ತಾಳೆ.ಆದ್ದರಿಂದಲೇ ಹೆಣ್ಣಿಗೆ ಪವಿತ್ರ ಸ್ಥಾನ ನೀಡಲಾಗಿದೆ ಎಂದರು.

ಮಹಿಳೆ ಇಂದು ಎಲ್ಲಾ ಕ್ಷೇತ್ರಗಳಲ್ಲಿಯೂ ತನ್ನ ಸಾಧನೆಯ ಛಾಪು ಮೂಡಿಸುತಿದ್ದಾಳೆ.ಆಕೆ ಕಾಲಿಡದ ಕ್ಷೇತ್ರವಿಲ್ಲ. ಏಕಾಂಗಿಯಾಗಿ ಯುದ್ದ ವಿಮಾನ ನಡೆಸುವಂತಹ ಅತಿ ಕೌಶಲ್ಯಯುಕ್ತ ಕೆಲಸದಲ್ಲಿಯೂ ಸೈ ಎನಿಸಿಕೊಂಡಿರುವ ಮಹಿಳೆಯನ್ನು ಅಬಲೆ ಎನ್ನುವ ಮಾತು ಒಪ್ಪುವಂತಹದ್ದಲ್ಲ. ಅಂತರರಾಷ್ಟ್ರೀಯ ಮಹಿಳಾ ದಿನವೆಂಬುದು ನಮ್ಮ ಸಾಧನೆಯ ಹಿನ್ನೋಟವನ್ನು ನೆನಪಿಸುವ ಕಾರ್ಯಕ್ರಮ ವಲ್ಲದೆ, ಮುಂದಿನ ಸಾಧನೆಗೆ ಸ್ಪೂರ್ತಿ ನೀಡುವ ಕಾರ್ಯಕ್ರಮವಾಗಿದೆ. ಇದನ್ನು ಪ್ರತಿಯೊಬ್ಬ ಮಹಿಳೆಯರು ಅರ್ಥ ಮಾಡಿಕೊಂಡು ಮುನ್ನೆಡೆಯಬೇಕೆಂದು ರೂಪಾ ಶೆಟ್ಟಾಳಯ್ಯ ತಿಳಿಸಿದರು.

ಪ್ರಾಸ್ತಾವಿಕ ನುಡಿಗಳನ್ನಾಡಿದ ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಉಪನಿರ್ದೇಶಕರಾದ ರೋಹಿತ್ ಗಂಗಾಧರ್ ಮಾತನಾಡಿ,ಓರ್ವ ಅಂತರರಾಷ್ಟ್ರೀಯ ಕ್ರೀಡಾಪಟುವಾಗಿ, ಅಧಿಕಾರಿಯಾಗಿ ನನ್ನ ನೆಚ್ಚಿನ ಕ್ಷೇತ್ರದಲ್ಲಿ ಏನಾದರೂ ಸಾಧನೆ ಮಾಡಿದ್ದರೆ, ಅದಕ್ಕೆ ಬೆನ್ನೆಲುಬಾಗಿ ನಿಂತವರು ನನ್ನ ತಾಯಿ ಮತ್ತು ಪತ್ನಿ.ಇತಿಹಾಸವನ್ನು ಗಮನಿಸಿದಾಗ, ರಾಷ್ಟ್ರಪಿತ ಮಹಾತ್ಮಗಾಂಧಿ ಹಿಂದೆ ಕಸ್ತೂರಬಾ, ಡಾ.ಬಿ.ಆರ್.ಅಂಬೇಡ್ಕರ್ ಹಿಂದೆ ರಮಾಬಾಯಿ ಇರುವಂತೆ, ಹಲವು ಗಣ್ಯರ ಯಶಸ್ಸಿನ ಹಿಂದೆ ಆ ಮನೆಯ ಗೃಹಿಣಿಯರು ಇದ್ದಾರೆ.ಇವರು ನಿಜವಾಗಿಯೂ ಪ್ರಾತಸ್ಮರಣೆಯರು. ಇಂದಿನ ಕ್ರೀಡಾ ಸ್ಪರ್ಧೆಗಳಲ್ಲಿ ಎಲ್ಲರೂ ಉತ್ಸಾಹದಿಂದ ಭಾಗವಹಿಸಿ, ನಿಮ್ಮೆಲ್ಲಾ ಒತ್ತಡದ ಬದುಕನ್ನು ಕೆಲ ಗಂಟೆಗಳ ಕಾಲ ಮರೆತು ಸಂತೋಷದಿಂದ ಇರುವಂತೆ ಮನವಿ ಮಾಡಿದರು.

ಸಿಡಿಪಿಓ ಸರೋಜಮ್ಮ, ಬಿಸಿಎಂ ಅಧಿಕಾರಿ ಎಸ್.ಜಿ.ನಿರ್ಮಲ, ಯುವಸಬಲೀಕರಣ ಇಲಾಖೆಯ ಕಚೇರಿ ಅಧೀಕ್ಷಕರಾದ ಚಂದ್ರಕಲಾ ಎಸ್.ಅವರುಗಳು ಅಂತರರಾಷ್ಟ್ರೀಯ ಮಹಿಳಾ ದಿನದ ಕುರಿತು ಮಾತನಾಡಿದವರು. ವೇದಿಕೆಯಲ್ಲಿ ಅಂತರರಾಷ್ಟ್ರೀಯ ಕಬ್ಬಡಿ ತರಬೇತುದಾರ ಮಹಮದ್ ಇಸ್ಮಾಯಿಲ್, ಮಂಜುನಾಥ್, ಪ್ರದೀಪಕುಮಾರ್ ಮತ್ತಿತರರು ಪಾಲ್ಗೊಂಡಿದ್ದರು.

# ಲಿಂಕ್ ಕೆನಾಲ್ ಮೂಲಕ ತಾಲ್ಲೂಕಿಗೆ ನೀರು: ಶಾಸಕ ರಂಗನಾಥ್ ವಿಶ್ವಾಸ



ಕುಣಿಗಲ್ : ಲಿಂಕ್ ಕೆನಾಲ್ ಮೂಲಕ ತಾಲೂಕಿಗೆ ನೀರು ತಪ್ಪದೆ ತರುವುದಾಗಿ ಶಾಸಕ ಡಾಕ್ಟರ್ ಎಚ್ ಡಿ ರಂಗನಾಥ್ ವಿಶ್ವಾಸ ವ್ಯಕ್ತಪಡಿಸಿದರು.

ಪಟ್ಟಣದ ಎಪಿಎಂಸಿ ಕಚೇರಿ ಆವರಣದಲ್ಲಿ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮವು ರೈತರಿಂದ ಸರ್ಕಾರವು ಬೆಂಬಲ ಬೆಲೆಗೆ ರಾಗಿ ಖರೀದಿ ಕೇಂದ್ರಕ್ಕೆ ಚಾಲನೆ ನೀಡಿ ಮಾತನಾಡುತ್ತಾ ತಾಲೂಕಿನಲ್ಲಿ 12 ಸಾವಿರ ರೈತರು ನೋಂದಾಯಿಸಿ ಕೊಂಡಿದ್ದು ಸುಮಾರು 2.30 ಲಕ್ಷ ರಾಗಿ ಖರೀದಿ ಮಾಡುವ ಗುರಿಇದ್ದು ಜಿಲ್ಲೆಯಲ್ಲಿ ಪ್ರಥಮ ಸ್ಥಾನದಲ್ಲಿದೆ ಹೊಂದಿದ್ದು ಸರ್ಕಾರ ಪ್ರತಿ ಕ್ವಿಂಟಾಲ್ ರಾಗಿಗೆ ಬೆಂಬಲ ಬೆಲೆಯಾಗಿ 4,290 ರೂ. ನೀಡುತ್ತಿದ್ದು ಕಳೆದ ಬಾರಿಗಿಂತ ಹೆಚ್ಚು ನೀಡುತ್ತಿದೆ ಸರ್ಕಾರ ರಾಜ್ಯಾದ್ಯಂತ 7 ಲಕ್ಷ ಮೆಟ್ರಿಕ್ ಟನ್ ರಾಗಿ ಖರೀದಿ ಮಾಡುತ್ತಿದ್ದು ರೈತರು ಬೇರೆಯವರಿಗೆ ಆರ್ ಟಿ ಸಿ ನೀಡಿ ಸುಳ್ಳು ಮಾಹಿತಿ ನೀಡಿ ಮಾರಾಟ ಮಾಡಬಾರ ದೆಂದು ತಿಳಿಸುತ್ತಾ ನಮ್ಮ ತಾಲೂಕಿನ ರೈತರಿಗೆ ಮೊದಲು ಆದ್ಯತೆ ನೀಡಬೇಕು ರೈತರಿಗೆ ಯಾವುದೇ ಸಮಸ್ಯೆ ಉಂಟಾದರೆ ತಮ್ಮ ಗಮನಕ್ಕೆ ತರಬೇಕೆಂದು ತಿಳಿಸುತ್ತಾ ಲಿಂಕ್ ಕೆನಲ್ ಮೂಲಕ ನೀರು : ತಾಲೂಕಿಗೆ ಲಿಂಕ್ ಕೆನಲ್ ಮೂಲಕ ನೀರು ತಂದೆ ತರುವೆ ಹೇಮಾವತಿ ಲಿಂಕ್ ಕೆನಾಲ್ ಯೋಜನೆ ಅನುಷ್ಠಾನಕ್ಕಾಗಿ ಯಾವುದೇ ಅಡೆತಡೆ ಉಂಟಾದರೂ ಸರಿ ತಾಲೂಕಿನ ರೈತರ ಹಿತ ಕಾಯುಲು ಎಂತಹ ತ್ಯಾಗಕ್ಕೂ ಸಿದ್ಧ ಎಂದರು. ಈ ಸಂದರ್ಭದಲ್ಲಿ ತಹಸಿಲ್ದಾರ್ ಯು.ರಶ್ಮಿ, ಜಿಲ್ಲಾ ಆಹಾರ ವ್ಯವಸ್ಥಾಪಕ ರಾದ ಶ್ರೀಧರ್, ತಾಲೂಕು ವ್ಯವಸ್ಥಾಪಕ ರಾದ ಕೃಷ್ಣಮೂರ್ತಿ,ಆಹಾರ ಶಿರಸ್ಥೆದಾರ್ ಹರ್ಷ, ಆಹಾರ ಇನ್ಸ್ಪೆಕ್ಟರ್ ಸಚಿನ್, ಚನ್ನಮ್ಮ, ರಂಗಣ್ಣ ಗೌಡ, ಬೇಗೂರು ನಾರಾಯಣ, ಸುಂದರಕುಪ್ಪೆ ಪಾಪಣ್ಣ, ಮಾಜಿ ಗ್ರಾ ಪಂ ಸದಸ್ಯ ಮೂರ್ತಿ, ಪುರಸಭಾ ಸದಸ್ಯ ದೇವರಾಜ್,ಮಾಜಿ ಸದಸ್ಯ ಪಾಪಣ್ಣ ಇತರರು ಇದ್ದರು

